ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ ದಿನಾಂಕ : DATE : 22/06/2019

# ಭೂ ಕಬಳಿಕೆ ಆರೋಪ : ಶಿವಲಿಂಗೇಗೌಡ ಖುದ್ದು ಹಾಜರಿಗೆ ಕೋರ್ಟ್ ಆದೇಶ



**ಬೆಂಗಳೂರು:** ಭೂ ಕಬಳಿಕೆ ಆರೋಪ ಪ್ರಕರಣದ ವಿಚಾರಣೆಗೆ ನಿರಂತರವಾಗಿ ಗೈರು ಹಾಜರಾಗುತ್ತಿರುವ ಹಾಸನ ಜಿಲ್ಲೆಯ ಅರಸೀಕೆರೆ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಶಾಸಕ ಶಿವಲಿಂಗೇಗೌಡ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಭೂ ಕಬಳಿಕೆ ತಡೆ ವಿಶೇಷ ನ್ಯಾಯಾಲಯ, ಜು.27ರಂದು ತಪ್ಪದೇ ಹಾಜರಾಗುವಂತೆ ಆದೇಶಿಸಿದೆ.

ಶುಕ್ರವಾರ ದೂರುದಾರರ ಪರ ವಾದಿಸಿದ ಹಿರಿಯ ವಕೀಲ ದೇವರಾಜಗೌಡ, ಶಿವಲಿಂಗೇಗೌಡ ಒಬ್ಬ ಜವಾಬ್ದಾರಿಯುತ ಜನಪ್ರತಿನಿಧಿಯಾಗಿದ್ದು ನ್ಯಾಯಾಲಯದ ಪ್ರಕ್ರಿಯೆಗಳಿಗೆ ಗೌರವ ಸಲ್ಲಿಸಿಲ್ಲ. ವಿಚಾರಣೆಗೆ ಪದೇ ಪದೆ ಗೈರು ಹಾಜರಾಗುವ ಮೂಲಕ ನ್ಯಾಯಾಲಯಕ್ಕೆ ಅಪಮಾನ ಎಸಗಿದ್ದಾರೆ. ಅವರು ವಿಚಾರಣೆಗೆ ಬರುವಂತೆಯೂ ಕಾಣುತ್ತಿಲ್ಲ. ಹೀಗಾಗಿ ಅವರ ವಿರುದ್ಧ ಜಾಮೀನು ರಹಿತ ವಾರಂಟ್ ಜಾರಿ ಮಾಡಬೇಕೆಂದು ನ್ಯಾಯಾಲಯಕ್ಕೆ ಮನವಿ ಮಾಡಿದರು. ಈ ವೇಳೆ ಶಾಸಕ ಶಿವಲಿಂಗೇಗೌಡ ಪರ ವಕೀಲರು ಪೀಠಕ್ಕೆ ಮನವಿ ಮಾಡಿ, ಮುಂದಿನ ವಿಚಾರಣೆಗೆ ಶಾಸಕರು ತಪ್ಪದೆ ಕೋರ್ಟ್‌ಗೆ ಹಾಜರಾಗುತ್ತಾರೆ. ಅವರ ವಿರುದ್ಧ ಸದ್ಯ ಯಾವುದೇ ಕ್ರಮ ಕೈಗೊಳ್ಳಬಾರದು ಎಂದು ಕೋರಿದರು. ವಕೀಲರ ಕೋರಿಕೆಗೆ ಸಮ್ಮತಿ ಸೂಚಿಸಿದ ನ್ಯಾಯಾಲಯ ವಿಚಾರಣೆಯನ್ನು ಜು.27ಕ್ಕೆ ಮುಂದೂಡಿತು.

**ಪ್ರಕರಣದ ಹಿನ್ನೆಲೆ:** ಶಾಸಕ ಶಿವಲಿಂಗೇಗೌಡ ವಿರುದ್ಧ ಅರಸೀಕೆರೆ ಪಟ್ಟಣದ ಸರ್ವೇ ನಂಬರ್ 290/2ರಲ್ಲಿನ ಸಾರ್ವಜನಿಕ ಸರಕಾರಿ ಉದ್ಯಾನ ಜಾಗದಲ್ಲಿ ಸ್ವಂತ ಮನೆ ನಿರ್ಮಾಣ ಮಾಡಿಕೊಂಡಿರುವ ಆರೋಪವಿದೆ. ಈ ಸಂಬಂಧ ಸ್ಥಳೀಯ ನಿವಾಸಿ ಎಚ್. ವೀರಭದ್ರಪ್ಪ ಎಂಬುವರು 2017ರಲ್ಲಿ ಭೂ ಕಬಳಿಕೆ ತಡೆ ವಿಶೇಷ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದ್ದಾರೆ. ಈ ಸಂಬಂಧ ಸಮಗ್ರ ತನಿಖೆ ನಡೆಸಿ ವರದಿ ನೀಡುವಂತೆ ಕೋರ್ಟ್ ಹಾಸನ ಜಿಲ್ಲಾಧಿಕಾರಿಗಳಿಗೆ ಸೂಚಿಸಿತ್ತು. ಹಾಸನ ಜಿಲ್ಲಾಧಿಕಾರಿ ತನಿಖೆ ನಡೆಸಿ ಒತ್ತುವರಿ ಸಾಬೀತುಪಡಿಸುವಂತಹ ಅಂಶಗಳನ್ನು ನ್ಯಾಯಾಲಯದ ಗಮನಕ್ಕೆ ತಂದಿದ್ದರು. ಇದೇ ವೇಳೆ ಶಾಸಕ ಶಿವಲಿಂಗೇಗೌಡ ಅವರು ಪ್ರಕರಣ ಸಂಬಂಧ ನ್ಯಾಯಾಲಯದಿಂದ ಜಾಮೀನು ಕೂಡ ಪಡೆದಿದ್ದರು. ಆದರೆ ಪ್ರಕರಣದ ವಿಚಾರಣೆಗೆ ಹಾಜರಾಗದ ಹಿನ್ನೆಲೆಯಲ್ಲಿ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ.